# 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು

**ಸಿ.ಸಿ 9163/2022 ಸಿ. ಡಬ್ಲುಃ 01**

**ಪಿ. ಡಬ್ಲುಃ 01**

| | |
|---|---|
| ಸಾಕ್ಷಿದಾರರ ಹೆಸರು<br>ತಂದೆ/ಗಂಡನ ಹೆಸರು<br>ವಯಸ್ಸು<br>ಕೆಲಸ<br>ವಾಸ | ಪುಟ್ಟಲಕ್ಷ್ಮಿ<br>ಶಂಕರ ನಾಯಕ<br>35 ವರ್ಷ<br>ಗೃಹಿಣಿ<br>ಮಲ್ಲಹಳ್ಳಿ. |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 25-02-2026** |

## ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ವಕೀಲರಿಂದಃ

ಮೃತ ಸೀರಮ್ಮ ನನ್ನ ತಾಯಿ ಇರುತ್ತಾರೆ. ನನಗೆ ಚಾಸಾ-1 ರಿಂದ 6 ರವರ ಪರಿಚಯ ಇರುತ್ತದೆ. ನ್ಯಾಯಾಲಯದ ಮುಂದೆ ಇರುವ ಆರೋಪಿ ನನಗೆ ಗೊತ್ತಿಲ್ಲ. ಆರೋಪಿ ಯಾವ ರೀತಿ ವಾಹನವನ್ನು ಚಾಲನೆ ಮಾಡಿಕೊಂಡು ಬಂದು ಯಾರಿಗೆ ಡಿಕ್ಕಿಪಡಿಸಿದ ಎಂದು ನನಗೆ ಗೊತ್ತಿಲ್ಲ. ನಾನು ಯಾವುದೇ ಅಪಘಾತವನ್ನು ಕಣ್ಣಾರೆ ನೋಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು ಅದು ದೂರು ಆಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು, ಅದರ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಿಪಿ-1

ಕ್ಕೆ ಸುಮಾರು 4 ವರ್ಷಗಳ ಹಿಂದೆ ಪೊಲೀಸರ ಕೋರಿಕೆ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು ಅದು ಸ್ಥಳ ಮಹಜರ್ ಆಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ–2 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ–2(ಎ) ಎಂದು ಗುರುತಿಸಲಾಯಿತು.

ನಿಪಿ–2 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಿಪಿ–2 ಕ್ಕೆ ಸುಮಾರು 4 ವರ್ಷಗಳ ಹಿಂದೆ ಪೊಲೀಸರ ಕೋರಿಕೆ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ–2 ಕ್ಕೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು ಅದು ಅಮಾನತ್ತು ಮಹಜರ್ ಆಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ–3 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ–3(ಎ) ಎಂದು ಗುರುತಿಸಲಾಯಿತು.

ನಿಪಿ–3 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಿಪಿ–3 ಕ್ಕೆ ಸುಮಾರು 4 ವರ್ಷಗಳ ಹಿಂದೆ ಪೊಲೀಸರ ಕೋರಿಕೆ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ–3 ಕ್ಕೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಯಾವುದೇ ಮರು ಹೇಳಿಕೆ ಪಡೆದಿಲ್ಲ. ಈ ಪ್ರಕರಣದ ವಿದ್ಯಮಾನ ಗೊತ್ತಿಲ್ಲ.

(ಸಸಅ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು)

**<u>ಪಾಟೀ ಸವಾಲುಃ ಮಾನ್ಯ ಎಪಿಪಿ ಯವರಿಂದ</u>**

ದಿಃ19-12-2022 ರಂದು ಬೆಳಗ್ಗೆ ನನ್ನ ತಾಯಿ ಸೀರಮ್ಮನವರಿಗೆ ತಲೆ ನೋವು ಕಾಣಿಕೊಂಡಿದ್ದರಿಂದ ನನ್ನ ತಂದೆ ಬಸವರಾಜ ನಾಯಕ ರವರು ಆಸ್ಪತ್ರೆಗೆ ತೋರಿಸಿಕೊಂಡು ಬರುವುದಾಗಿ ಹೇಳಿ ಕೆಎ-09-ವೈ-3727 ರ ಬೈಕ್ ಹಿಂಭಾಗದಲ್ಲಿ ನನ್ನ ತಾಯಿಯನ್ನು ಕೂರಿಸಿಕೊಂಡು ನಮ್ಮ ಮನೆಯಿಂದ ಹೋದರು ಎಂದರೆ ಸರಿಯಲ್ಲ. ನಂತರ 11-50 ಗಂಟೆ ಸಮಯದಲ್ಲಿ ಚಾಸಾ-5 ರವರು ನಮ್ಮ ಮನೆಯ ಮೊಬೈಲ್ ಕರೆ ಮಾಡಿ ನಂಜನಗೂಡು ತಾಂಡ್ಯ ಕೈಗಾರಿಕಾ ಪ್ರದೇಶ ರೈಲ್ವೆ ಗೇಟ್ ನ ಮುಂದೆ ನಿಮ್ಮ ಅಪ್ಪ ಬೈಕನ್ನು ಚಲಾಯಿಸಿಕೊಂಡು ಹೋಗುತ್ತಿದ್ದಾಗೆ ಬೈಕ್ ಹಿಂಬದಿ ಕುಳಿತಿದ್ದ ನಿಮ್ಮ ತಾಯಿ ಬೈಕ್ ನಿಂದ ಬಿದ್ದು ತಲೆಗೆ ಪೆಟ್ಟಾಗಿ ರಕ್ತ ಬಂದು ನಿಮ್ಮ ತಾಯಿಯನ್ನು ನಂಜನಗೂಡಿನ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗುತ್ತಿದ್ದೇವೆ ಎಂದರೆ ಸರಿಯಲ್ಲ. ನನ್ನನ್ನು ಆಸ್ಪತ್ರೆಗೆ ಬೇರೆ ಬನ್ನಿ ಎಂದು ತಿಳಿಸಿದಾಗ ನಾನು ಮತ್ತು ಚಾಸಾ-2 ರವರು ನಂಜನಗೂಡಿನ ಸರ್ಕಾರಿ ಆಸ್ಪತ್ರೆಗೆ ಬಂದು ನೋಡಿದಾಗ ನನ್ನ ತಾಯಿ ಮೃತ ಸೀರಮ್ಮನವರಿಗೆ ತಲೆಗೆ ಪೆಟ್ಟಾಗಿ ರಕ್ತ ಬಂದಿತ್ತು ಹಾಗೂ ಕೈಕಾಲುಗಳಿಗೆ ಪೆಟ್ಟಾಗಿತ್ತು ಎಂದರೆ ಸರಿಯಲ್ಲ. ನಂತರ ನಮ್ಮ ತಾಯಿಯನ್ನು ಪರೀಕ್ಷಿಸಿದ ವೈದ್ಯರು ಮೃತ ಪಟ್ಟಿರುವುದಾಗಿ ತಿಳಿಸಿದರು ಎಂದರೆ ಸರಿಯಲ್ಲ. ಆಗ ಅಲ್ಲೆ ಇದ್ದ ಚಾಸಾ-5

ರವರನ್ನು ಕೇಳಿದಾಗ ಬೆಳಗ್ಗೆ 11-30 ಗಂಟೆ ಸಮಯದಲ್ಲಿ ತಾಂಡ್ಯ ಕೈಗಾರಿಕಾ ಏರಿಯಾ ಕಡೆ ಹೋಗುತ್ತಿದ್ದಾಗ ಕೆಎ-09-ವೈ-3727 ನಿಮ್ಮ ತಾಯಿಯನ್ನು ಕೂರಿಸಿಕೊಂಡು ಚಿಕ್ಕಯ್ಯನ ಛತ್ರದ ಕಡೆಯಿಂದ ಹಿಮ್ಮಾವು ಕಡೆಗೆ ಕೈಗಾರಿಕಾ ಪ್ರದೇಶ ಪದ್ಮಾವತಿ ಮಾರ್ಬಲ್ ಅಂಗಡಿ ಸಮೀಪ ಅತಿವೇಗ ಹಾಗೂ ಅಜಾಗರೂಕತೆಯಿಂದ ಬೈಕ್ ಚಾಲನೆ ಮಾಡಿಕೊಂಡು ಹೋಗುತ್ತಿದ್ದರು ಎಂದು ತಿಳಿಸಿದರು ಎಂದರೆ ಸರಿಯಲ್ಲ. ನಿಮ್ಮ ಸೀರಮ್ಮನವರು ಬೈಕಿನಿಂದ ಕಳೆಕ್ಕೆ ಬಿದ್ದರು ಎಂದು ತಿಳಿಸಿದರು ಎಂದರೆ ಸರಿಯಲ್ಲ. ನಂತರ ನಿಮ್ಮ ತಂದೆ ಸ್ವಲ್ಪ ಮುಂದೆ ಹೋಗಿ ಬೈಕನ್ನು ನಿಲ್ಲಿಸಿ ನಂತರ ಕೆಳಕ್ಕೆ ಬಿದ್ದ ಸೀರಮ್ಮನವರು ಎತ್ತಿ ಕೂರಿಸಿ ನೋಡಿದಾಗ ಸೀರಮ್ಮನವರ ತಲೆಗೆ ರಕ್ತ ಬರುತ್ತಿತ್ತು ಎಂದು ತಿಳಿಸಿದರು ಎಂದರೆ ಸರಿಯಲ್ಲ. ಮತ್ತು ಅಷ್ಟರಲ್ಲಿ ಸೀರಮ್ಮನವರಿಗೆ ನಂಜನಗೂಡಿನ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋದರು ಎಂದು ತಿಳಿಸಿದರು ಎಂದರೆ ಸರಿಯಲ್ಲ. ಈ ಅಪಘಾತದ ಸಂಬಂಧವಾದ ನಿಪಿ-1 ರಂತೆ ಆರೋಪಿಯ ವಿರುದ್ದ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿಃ 20-10-2022 ರಂದು ಪೋಲೀಸರು ನನ್ನನ್ನು ಮತ್ತು ಚಾಸಾ-2 ಮತ್ತು 3 ರವರು ಬರಮಾಡಿಕೊಂಡು ನಾನೇ ಕೃತ್ಯ ನಡೆದ ಸ್ಥಳವನ್ನು ತೋರಿಸಿದ ಮೇರೆಗೆ 14-00 ಗಂಟೆಯಿಂದ 15-00 ಗಂಟೆಯವರಗೆ ಮಹಜರು ಕ್ರಮವನ್ನು ಜರುಗಿಸಿ

ದಿಃ 20-10-2022 ರಂದು ಪೋಲೀಸರು ನನ್ನನ್ನು ಮತ್ತು ಚಾಸಾ-2 ಮತ್ತು 3 ರವರು ಬರಮಾಡಿಕೊಂಡು 16-00 ಗಂಟೆಯಿಂದ 16-45 ಗಂಟೆಯವರಗೆ ಅಮಾನತ್ತು ಮಹಜರು ಕ್ರಮವನ್ನು ಜರುಗಿಸಿ ಅಪಘಾತ ಪಡಿಸಿದ ಕೆಎ-09-ವೈ-3727 ಹಿರೋ ಹೊಂಡಾ ಪ್ಯಾಶನ್ ಬೈಕನ್ನು

ವಾಹವನವನ್ನು ಮುಂದಿನ ಕ್ರಮಕ್ಕಾಗಿ ಪೋಲೀಸರು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ನಿಪಿ-3 ನ್ನು ಓದಿ ಹೇಳಿ ಸ್ಥಳದಲ್ಲಿ ನನ್ನ ಹಾಗೂ ಚಾಸಾ-2 ಮತ್ತು 3 ರವರ ಸಹಿ ಪಡೆದುಕೊಂಡರು ಎಂದರೆ ಸರಿಯಲ್ಲ.

ದಿಃ 02-11-2022 ರಂದು ಪೋಲೀಸರು ನನ್ನನ್ನು ವಿಚಾರಣೆ ಮಾಡಿ ಮರು ಹೇಳಿಕೆ ಪಡೆದುಕೊಂಡರು ಎಂದರೆ ಸರಿಯಲ್ಲ.

ದಿ.19-10-2022 ರಂದು ನಾನು ನನ್ನ ಮರು ಹೇಳಿಕೆಯಲ್ಲಿ ನಾನು ದೂರು ನೀಡುವಾಗ ____________________ ನನಗೆ ಬಸವರಾಜನಾಯಕ ಎಂದು ಕರೆಯುತ್ತಿದ್ದ ಕಾರಣದಿಂದ ನಾನು ದೂರಿನಲ್ಲಿ ಬಸವರಾಜನಾಯಕ ಎಂದು ಹೆಸರು ನೀಡಿರುತ್ತೇನೆ. ದೂರು ನೀಡಿರುತ್ತೇನೆ. ಎಂದು ಮೇಲೆ ಓದಿ ಹೇಳಲಾದಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ಸಾಕ್ಷಿಗೆ ಹೇಳಿಕೆ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿ ಸದರಿ ಹೇಳಿಕೆ ಭಾಗವನ್ನು ಅಲ್ಲಗಳೆದಿದ್ದರಿಂದ ಕೆಂಪು ಶಾಯಿಯಿಂದ ಗುರುತಿಸಲಾದ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು.

ನಿಪಿ-1 ರಂತೆ ಆರೋಪಿ ವಿರುದ್ಧ ದೂರು ನೀಡಿದ್ದರು ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ರಿಂದ 4 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**